ಶ್ರೀ ಕೆ.ಹೆಚ್. ರಂಗನಾಥ್ (ಲೋಕೋಪಯೋಗಿ ಸಚಿವರು) :

ಅ) ಬಂದಿದೆ.

ಆ) ಸೇತುವೆ ದುರಸ್ತಿ ಕಾರ್ಯ ಕೈಗೊಂಡಿದ್ದು ಜನವರಿ 1993 ರ ಅಂತ್ಯದಲ್ಲಿ ಪೂರ್ಣಗೊಳಿಸಲಾಗುವುದು.

ತುಮಕೂರು ಜಿಲ್ಲೆಯಲ್ಲಿ ನೀರು ಸರಬರಾಜು ಯೋಜನೆ

913 - ಶ್ರೀ ಟಿ.ಬಿ. ಜಯಚಂದ್ರ (ಕಳ್ಳಂಬೆಳ್ಳ) : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

1) ತುಮಕೂರು ಜಿಲ್ಲೆಯಲ್ಲಿ ನೀರು ಸರಬರಾಜು ಯೋಜನೆಯಡಿಯಲ್ಲಿ ನಿಗಧಿಪಡಿಸುವ ಅನುದಾನವೆಷ್ಟು ?

2) ನೀರು ಸರಬರಾಜು ಯೋಜನೆಗಳನ್ನು ಪೂರ್ಣಗೊಳಿಸಲು ಬೇಕಾಗಿರುವ ಅನುದಾನ ಹಾಗೂ ವಿಶೇಷವಾಗಿ ಕಿರುನೀರು ಸರಬಾರಾಜು ಯೋಜನೆಗಳನ್ನು ಪೂರೈಸಲು ಬೇಕಾಗುವ ಅನುದಾನವೆಷ್ಟು ?

3) 199-93ನೇ ಸಾಲಿನಲ್ಲಿ ಕಳ್ಳಂಬೆಳ್ಳ ವಿಧಾನಸಭಾ ಕ್ಷೇತ್ರದಲ್ಲಿ ಎಷ್ಟು ಕಿರುನೀರು ಸರಬರಾಜು ಯೋಜನೆಗಳನ್ನು ಕೈಗೆತ್ತಿಕೊಳ್ಳಲಾಗಿದೆ.

4) ಈ ಎಲ್ಲಾ ಕಾಮಗಾರಿಗಳನ್ನು ನಿಗಧಿತ ಅವಧಿಯಲ್ಲಿ ಸರಕಾರವು ಪೂರ್ಣಗೊಳಿಸುವುದೆ ?

ಶ್ರೀ ಎಂ.ವೈ. ಘೋರ್ಪಡೆ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಸಚಿವರು) :

ಅ) ರೂ. 303.50 ಲಕ್ಷಗಳು.

ಆ) ನೀರು ಸರಬರಾಜು ಯೋಜನೆಗಳನ್ನು ಪೂರ್ಣಗೊಳಿಸಲು ಬೇಕಾಗುವ ಅನುದಾನ ರೂ. 359.50 ಲಕ್ಷಗಳು. ಇದರಲ್ಲಿ ಕಿರು ನೀರು ಸರಬರಾಜು ಯೋಜನೆಗಳನ್ನು ಪೂರೈಸಲು ಬೇಕಾಗುವ ಅನುದಾನ ರೂ. 83.74 ಲಕ್ಷಗಳು.

ಇ) 11.

ಈ) ಹೌದು.

ನೆಲಮಂಗಲ ಟೌನ್‌ನಲ್ಲಿ ನ್ಯಾಯಾಲಯದ ಕಟ್ಟಡ.

61 - ಶ್ರೀ ಆಂಜನಮೂರ್ತಿ (ನೆಲಮಂಗಲ) : ಮಾನ್ಯ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ನೆಲಮಂಗಲದಲ್ಲಿರುವ ಹಾಲಿ ಮುನ್ಸಿಫ್ ಮ್ಯಾಜಿಸ್ಟ್ರೇಟ್ ನ್ಯಾಯಾಲಯವು ಬಾಡಿಗೆ ಕೊಠಡಿಯಲ್ಲಿ ನಡೆಯುತ್ತಿರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ.

ಆ) ಹಾಗಿದ್ದಲ್ಲಿ ಸಾರ್ವಜನಿಕ ಹಿತದೃಷ್ಟಿಯಿಂದ ಪ್ರತ್ಯೇಕವಾದ ದೊಡ್ಡ ಕಟ್ಟಡ ನಿರ್ಮಿಸಲು ಸರ್ಕಾರವು ಸೂಕ್ತ ಕ್ರಮಕೈಗೊಳ್ಳುವುದೇ ?

ಶ್ರೀ ಹಾರ್ನಳ್ಳಿ ರಾಮಸ್ವಾಮಿ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು) :